(ಈ) ನಿರ್ವಹಿಸುತ್ತಿರುವ ಕಾಮಗಾರಿಯು ಕಟ್ಟಡದ ಮೊದಲು ಅಂತಸ್ತಿನ ನಿರ್ಮಾಣವಾಗಿದ್ದು, ಹಾಲಿ ಇರುವ ಕಟ್ಟಡಗಳಿಗೆ ಧೂಲು ಇತ್ಯಾದಿ ತಡೆಯಲು ಮುನ್ನೆಚ್ಚರಿಕೆ ಕ್ರಮ ವಹಿಸಿ ತಡೆಗಳನ್ನು ಅಳವಡಿಸಲಾಗಿದೆ. ಆದುದರಿಂದ, ಆಸ್ಪತ್ರೆಯ ಆವರಣದಲ್ಲಿ ಧೂಳು ಇತ್ಯಾದಿ ತೊಂದರೆ ಯಾಗದಂತೆ ಕ್ರಮ ವಹಿಸಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ಲೋಪದೋಷ

789 (1467); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

(ಅ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಬಡಜನತೆಗೆ ಸಮರ್ಪ ಕವಾಗಿ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಾದರೆ, ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬಡಜನರಿಗೆ ಸೂಕ್ತ ಚಿಕಿತ್ಸೆ ದೊರಕದಿರುವುದು ಹಾಗೂ ಹಿರಿಯ ಅಧಿಕಾರಿಗಳು ಭೇಟಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ವ್ಯವಸ್ಥೆ ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮ ಗಳೇನು (ವಿವರ ನೀಡುವುದು)?

ಶ್ರೀ ಯು. ಟಿ. ಖಾದರ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳಿಗೆ ಸಮರ್ಪಕ ವಾಗಿ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಲು ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಈಗಾಗಲೇ ಒದಗಿಸಲಾಗಿದೆ. ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆಯಾಯ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ.

(ಆ) ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನಲ್ಲಿ 13 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇದ್ದು, ಈ ಕೇಂದ್ರಗಳಲ್ಲಿ 13 ವೈದ್ಯರ ಹುದ್ದೆಗಳು ಮಂಜೂರಾಗಿದ್ದು, 09 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದು ಹಾಗೂ 04 ಹುದ್ದೆಗಳು ಖಾಲಿಯಿವೆ.

ಸದರಿ ತಾಲ್ಲೂಕಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಹಾಗೂ ತಾಲ್ಲೂಕು ವೈದ್ಯಾಧಿಕಾರಿಯವರು, ಜಿಲ್ಲಾ ರೋಗ ವಾಹಕ ಆಶ್ರಿತ ಅಧಿಕಾರಿಗಳು, ಜಿಲ್ಲಾ ಕ್ಷಯ ರೋಗ ಅಧಿಕಾರಿಗಳು ಮತ್ತು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿರವರು ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಬಡಜನರಿಗೆ ಸೂಕ್ತ ಚಿಕಿತ್ಸೆ ದೊರಕುವಂತೆ ವ್ಯವಸ್ಥೆ ಮಾಡಿರುತ್ತಾರೆ.

(ಇ) ಉದ್ಭವಿಸುವುದಿಲ್ಲ.

ನಿರುದ್ಯೋಗಿಗಳಿಗೆ ನೀಡುವ ತರಬೇತಿಗಳು:

790 (1468); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದ ಬಡ ವಿದ್ಯಾವಂತ ನಿರುದ್ಯೋಗಿಗಳಿಗೆ ಸ್ವಯಂ ಉದ್ಯೋಗಿಗಳಾಗಲು ಸರ್ಕಾರ ಯಾವ ಯಾವ ತರಬೇತಿ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ (ವಿವರ ನೀಡುವುದು);

(ಆ) ಹಾಗಾದರೆ ಯಾವ ಯಾವ ತರಬೇತಿ ಕೇಂದ್ರಗಳಲ್ಲಿ ಎಷ್ಟು ಅವಧಿಯ ತರಬೇತಿ ನೀಡಲಾಗುತ್ತಿದೆ; ತರಬೇತಿ ಸಮಯದಲ್ಲಿ ನೀಡಲಾಗುವ ಸೌಲಭ್ಯಗಳೇನು, (ವಿವರ ನೀಡುವುದು);

(ಇ) ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತರಬೇತಿ ಕೇಂದ್ರಗಳು ಇವೆ; ಎಲ್ಲೆಲ್ಲಿ ಇವೆ; (ವಿವರ ನೀಡುವುದು);

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

(ಅ) ಸೆಂಟ್ರಲ್ ಇನ್ಸ್ಟಿಟ್ಯೂಟ್ ಆಫ್ ಪ್ಲಾಸ್ಟಿಕ್ ಇಂಜಿನಿಯರಿಂಗ್ ಟೆಕ್ನಾಲಜಿ, ಮೈಸೂರು ರವರ ಮೂಲಕ ಈ ಕೆಳಕಂಡ ವಿವಿಧ ಕೋರ್ಸುಗಳಲ್ಲಿ ತರಬೇತಿ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ.

1. Plastic processing Machinery Operation.
2. Injection Moulding Machine operator Training & Mantenance.
3. CAD/CAM/CAE Application in plastics product and Mould design.
4. CNC Machine Programming and Operation.
5. Mould Making Technology.

ಇದಲ್ಲದೆ ಪ್ರತೀ ವರ್ಷ ಇಲಾಖಾವತಿಯಿಂದ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಇರುವ ನರ್ಸಿಂಗ, ಪ್ಯಾರಾ ಮೆಡಿಕಲ್ ತರಬೇತಿ ಮತ್ತು ಐಎಎಸ್/ಐಪಿಎಸ್/ಕೆಎಎಸ್ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿಯನ್ನು ನೀಡಲಾಗುತ್ತಿದೆ ಹಾಗೂ 2014–15ನೇ ಸಾಲಿನಲ್ಲಿ ಅಪರೆಲ್ ಟ್ರೈನಿಂಗ್ ಅಂಡ್ ಡಿಸೈನ್ ಸೆಂಟರ್, ಇಂಡಿಯಾ ಟೂರಿಸಂ ಡೆವಲಪ್‌ಮೆಂಟ್ ಸೆಂಟರ್ ಮತ್ತು ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಫ್ಯಾಷನ್ ಟೆಕ್ನಾಲಜಿ, ಬೆಂಗಳೂರು ರವರ ಮೂಲಕ ಅಂದಾಜು 500 ಪರಿಶಿಷ್ಟ ಜಾತಿ ನಿರುದ್ಯೋಗಿ ಅಭ್ಯರ್ಥಿಗಳಿಗೆ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದಲ್ಲಿ ಈ ಕೆಳಕಂಡ 3 ರೀತಿಯ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

1. ಕಟ್ಟಡ ನಿರ್ಮಾಣ ಮತ್ತು ವಾದ್ಯ ಕಲೆ (ವಾಜಾ ಸಾಹಿತ್ಯ ಕಲೆ) ತರಬೇತಿ

2. ಕಸೂತಿ / ಹೊಲಿಗೆ ತರಬೇತಿ

3. ತೋಟಗಾರಿಕೆ ತರಬೇತಿ.

(ಆ) ಪ್ರಸ್ತುತ ಸೆಂಟ್ರಲ್ ಇನ್ಸ್ಟಿಟ್ಯೂಟ್ ಆಫ್ ಪ್ಲಾಸ್ಟಿಕ್ ಇಂಜಿನಿಯರಿಂಗ್ ಟೆಕ್ನಾಲಜಿ, ಮೈಸೂರು ರವರ ಮೂಲಕ ಪರಿಶಿಷ್ಟ ಜಾತಿ ಮತ್ತು ಪಂಗಡದ ನಿರುದ್ಯೋಗಿ ಯುವಕ ಯುವತಿಯರಿಗೆ 6 ತಿಂಗಳುಗಳ ಅವಧಿಗೆ ವಿವಿಧ ಕೋರ್ಸುಗಳಲ್ಲಿ ತರಬೇತಿ ನೀಡಲಾಗುತ್ತಿದೆ. ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಊಟ ಮತ್ತು ವಸತಿ ಸೌಲಭ್ಯದೊಂದಿಗೆ ಪ್ರತಿ ತಿಂಗಳು ಶಿಷ್ಯವೇತನವನ್ನು ನೀಡಲಾಗುತ್ತಿದೆ.

ತಾಂಡಾ ಅಭಿವೃದ್ಧಿ ನಿಗಮದಿಂದ ನೀಡಲಾಗುವ ಕಟ್ಟಡ ನಿರ್ಮಾಣ ಕೌಶಲ್ಯ/ವಾದ್ಯ ಕಲೆ ತರಬೇತಿಯು ಮೂರು ತಿಂಗಳಿನ ಕಾಲಾವಧಿಯದ್ದಾಗಿದ್ದು, ತರಬೇತಿಯಲ್ಲಿ ಭಾಗವಹಿಸುವ ಒಬ್ಬ ಅಭ್ಯರ್ಥಿಗೆ ರಜಾ ದಿನ ಹೊರತುಪಡಿಸಿ ದಿನವೊಂದಕ್ಕೆ ` 200/–ಗಳ ಶಿಷ್ಯವೇತನವನ್ನು ನೀಡಲಾಗುತ್ತಿದೆ. ಕಸೂತಿ / ಹೊಲಿಗೆ ತರಬೇತಿಯು ಮೂರು ತಿಂಗಳಿನ ಕಾಲಾವಧಿಯದ್ದಾಗಿದ್ದು, ಭಾಗವಹಿಸುವ ಅಭ್ಯರ್ಥಿಗೆ ಒಂದು ತಿಂಗಳಿಗೆ `1500/– ಗಳ ಶಿಷ್ಯ ವೇತನವನ್ನು ಪಾವತಿಸಲಾಗುತ್ತಿದೆ. ಇನ್ನು ತೋಟಗಾರಿಕೆ ತರಬೇತಿ 10 ತಿಂಗಳ ಕಾಲಾವಧಿಯದ್ದಾಗಿದ್ದು, ಭಾಗವಹಿಸುವ ಪ್ರತೀ ಅಭ್ಯರ್ಥಿಗೆ `1950/– ನ್ನು ವಿಶ್ವವಿದ್ಯಾನಿಲಯಕ್ಕೆ ಪಾವತಿಸಲಾಗುತ್ತಿದೆ.

(ಇ) ಪರೀಕ್ಷಾ ಪೂರ್ವ ತರಬೇತಿ ಕೇಂದ್ರದಿಂದ ತರಬೇತಿ ಕಾರ್ಯಕ್ರಮಗಳನ್ನು ರಾಜ್ಯಮಟ್ಟದಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದ್ದು, ಜಿಲ್ಲಾ ಮಟ್ಟದಲ್ಲಿ ಯಾವುದೇ ತರಬೇತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿಲ್ಲ. ತಾಂಡಾ ಅಭಿವೃದ್ಧಿ ನಿಗಮದ ತರಬೇತಿ ಕೇಂದ್ರವು